ದಿನಾಂಕಃ 14.11.2024 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು: ಪ್ರತಿವಾದಿಗಳ ಪರ ಶ್ರೀ ಎಂ.ವಿ.ಜೆ. ವಕೀಲರಿಂದ:**

ದಾವಾ ಐಟಂ ನಂ.15 ಸರ್ವೆ ನಂ.31/12 ರ ಚಕ್ಕುಬಂದಿ ನೆನಪಿಲ್ಲ. ಅದೇ ರೀತಿ ಉಳಿದ ದಾವಾ ಸ್ವತ್ತುಗಳ ಚಕ್ಕುಬಂದಿ ನೆನಪಿಲ್ಲ. ಈ ದಾವೆ ಸಲ್ಲಿಸುವ ಕಾಲಕ್ಕೆ ನಾನು ದಾವಾ ಜಮೀನುಗಳ ಸ್ವಾಧೀನ, ಅನುಭವ ಇರಲಿಲ್ಲ ಹಾಗೂ ಕೃಷಿಯನ್ನು ಮಾಡುತ್ತಿಲ್ಲ. ಈ ದಾವೆ ಸಲ್ಲಿಸುವ ಮುನ್ನ ಹಿರಿಯ ಸಿವಿಲ್ ನ್ಯಾಯಾದೀಶರ ನ್ಯಾಯಾಲಯದಲ್ಲಿ ಒ.ಎಸ್.23/2023 ರಂತೆ ವಿಬಾಗ ಕೋರಿ ದಾವೆ ಸಲ್ಲಿಸಿದ್ದೆ ಎಂದರೆ ಸರಿ. ಪ್ರಸ್ತುತ ದಾವೆಯ ಪ್ರತಿವಾದಿಗಳು ಸದರಿ ದಾವೆಯಲ್ಲೂ ಪ್ರತಿವಾದಿಗಳಾಗಿದ್ದರು ಎಂದರೆ ಸರಿ. ಸದರಿ ದಾವೆಯಲ್ಲಿ ಅವರು ಪ್ರತಿವಾದ ಪತ್ರ ಸಲ್ಲಿಸಿದ್ದರು ಎಂದರೆ ಸರಿ. ಆ ಪ್ರತಿವಾದ ಪತ್ರದಲ್ಲಿ ದಾವಾ ಜಮೀನುಗಳನ್ನು ಮಾರಾಟ ಮಾಡುವುದಿಲ್ಲ ಎಂದು ಹೇಳಿಕೊಂಡಿದ್ದರು ಎಂದರೆ ಸರಿ. ಆ ದಾವೆಯಲ್ಲಿ 3 ನೇ ಪ್ರತಿವಾದಿ ತನ್ನ ಸಾಕ್ಷ್ಯ ವಿಚಾರಣೆಯಲ್ಲಿ ದಾವಾ ಜಮೀನುಗಳು ಪಾಲು ಆಗುವವರೆಗೂ ಮಾರಾಟ ಮಾಡುವುದಿಲ್ಲ ಎಂದು ಹೇಳಿದ್ದರು ಎಂದರೆ ಸರಿ. ಆ ದಾವೆಯಲ್ಲಿ ತೀರ್ಪು ಬಂದ ನಂತರ ಎಫ್.ಡಿ.ಪಿ.3/2017 ದಾಖಲಿಸಿದ್ದೇನೆ ಎಂದರೆ ಸರಿ.

ಸದರಿ ಪ್ರಕರಣದಲ್ಲಿ ಆದ ಆದೇಶದ ವಿರುದ ಪ್ರತಿವಾದಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಜಿ ಸಲ್ಲಿಸಿದ್ದರು ಎಂದರೆ ಸರಿ. ರಿಟ್ ಅರ್ಜಿಯಲ್ಲಿ ನಾನು ಹಾಜರಾಗಿದ್ದೇನೆ ಎಂದರೆ ಸರಿ. ಸದರಿ ರಿಟ್ ಪ್ರಕರಣದಲ್ಲಿ ಅಸಲು ದಾವೆಯ ತೀರ್ಪು ಮತ್ತು ಎಫ್.ಡಿ.ಪಿ ಪ್ರಕರಣದ ಪ್ರಕ್ರಿಯೆಗಳನ್ನು ತಡೆ ಹಿಡಿಯಲಾಗಿದೆ ಎಂದರೆ ಸರಿ. ಸದರಿ ರಿಟ್ ಪ್ರಕರಣದಲ್ಲಿ ಪ್ರತಿವಾದಿಗಳು ದಾವಾ ಸ್ವತ್ತುಗಳನ್ನು ಮಾರಾಟ ಮಾಡುವುದಿಲ್ಲ ಎಂದುಹೇಳಿ ಪ್ರಮಾಣ ಪತ್ರವನ್ನು ಸಲ್ಲಿಸಿದ ನಂತರವೇ ತಡೆಯಾಜ್ಞೆ ನೀಡಲಾಗಿದೆ ಎಂದರೆ ಸರಿ. ರಿಟ್ ಪ್ರಕರಣ ಇನ್ನೂ ಬಾಕಿ ಇದೆ ಎಂದರೆ ಸರಿ. ಪ್ರತಿವಾದಿಗಳು ದಾವಾ ಸ್ವತ್ತುಗಳನ್ನು ಮರಾಟ ಮಾಡಲು ಪ್ರಯತ್ನಿಸುತ್ತಿದ್ದಾರೆ ಎಂದು ನನಗೆ ತಿಳಿದಿದ್ದು ಆ ಕಾರಣ ಈ ದಾವೆಯನ್ನು ಸಲ್ಲಿಸಿದ್ದೆ. ಯಾರಿಗೆ ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದರು ಎಂದು ನನಗೆ ಗೊತ್ತಿಲ್ಲ. ಆದರೆ ಮಂಗಳೂರಿನ ಕಡೆಯವರಿಗೆ ಮಾರಾಟ ಮಾಡಲು ಪ್ರಯತ್ನಿಸಿದ್ದರು ಎಂದು ನುಡಿಯುತ್ತಾರೆ. ಈ ವಿಚಾರವನ್ನು ವಾದಪತ್ರ ಮತ್ತು ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ತಿಳಿಸಿಲ್ಲ.

ನಾನು ಹಾಗೂ 1 ರಿಂದ 3 ಪ್ರತಿವಾದಿಗಳು ಕೃಷಿ ಆದಾಯವನ್ನೇ ಅವಲಂಬಿಸಿ ಜೀವನ ಮಾಡುತ್ತಿದ್ದೇವೆ ಎಂದರೆ ಸರಿ. 1 ರಿಂದ 6 ನೇ ಪ್ರತಿವಾದಿಗಳು ದಾವಾ ಜಮೀನುಗಳನ್ನು ವಿಭಾಗ ಮಾಡಿಕೊಂಡು ಪ್ರತ್ಯೇಕ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ. ಪ್ರತಿವಾದಿಗಳ ಮಕ್ಕಳಿಗೂ ಸಹ ಮದುವೆಯಾಗಿದೆ ಎಂದರೆ ಸರಿ. ಪ್ರತಿವಾದಿಗಳು ದಾವಾ ಜಮೀನುಗಳನ್ನು ಮಾರಾಟ ಮಾಡುತ್ತಿದ್ದಾರೆ ಎಂದು

ರಿಟ್ ಪ್ರಕರಣದಲ್ಲಿ ಅರ್ಜಿ ಸಲ್ಲಿಸಿಲ್ಲ. ಪ್ರತಿವಾದಿಗಳು ನಿಜವಾಗಿಯೂ ದಾವಾ ಜಮೀನುಗಳನ್ನು ಮಾರಾಟ ಮಾಡಲು ಪ್ರಯತ್ನಿಸಿದ್ದರೇ ಈ ಸಂಬಂಧ ರಿಟ್ ಪ್ರಕರಣದಲ್ಲಿ ಅರ್ಜಿ ಸಲ್ಲಿಸುತ್ತಿದ್ದೆ ಎಂದರೆ ಸರಿ. ಒ.ಎಸ್.21/2013 ರಲ್ಲಿ ರಾಜಿಗೆ ಪ್ರಯತ್ನಿಸಲಾಗಿತ್ತು ಎಂದರೆ ಸರಿಯಲ್ಲ. ದಾವಾ ಜಮೀನುಗಳನ್ನು ಖರೀದಿಸಲು ಬಂದಿದ್ದ ಮಂಗಳೂರಿನ ಕಡೆಯವರೇ ನನಗೆ ವಿಷಯ ತಿಳಿಸಿ, ಖರೀದಿ ಸಂಬಂದ ಮುಂಗಡ ಹಣವನ್ನು ಕೊಟ್ಟಿದ್ದೇವೆ ಎಂದು ತಿಳಿಸಿದ್ದರು. ಈ ರೀತಿ ಮುಂಗಡ ಹಣವನ್ನು 2ನೇ ಪ್ರತಿವಾದಿಗೆ ಕೊಟ್ಟಿರುವುದಾಗಿ ತಿಳಿಸಿದ್ದರು. ಸದರಿ ವಿಚಾರ ಯಾವ ದಿನಾಂಕ, ತಿಂಗಳು ಮತ್ತು ಇಸವಿಯಲ್ಲಿ ನನಗೆ ತಿಳಿಯಿತು ಎಂದು ಈಗ ನನಗೆ ನೆನಪಿಲ್ಲ. ಈ ವಿಚಾರವನ್ನು ವಾದಪತ್ರ ಮತ್ತು ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ತಿಳಿಸಿಲ್ಲ. ನಾನು ಈಗ ಹೇಳಿರುವ ವಿಚಾರವನ್ನು ಈಗ ಸೃಷ್ಟಿಸಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪ್ರತಿವಾದಿಗಳು ದಾವಾ ಜಮೀನನ್ನು ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದಾರೆ ಹಾಗೂ ಮುಂಗಡ ಹಣವನ್ನು ಪಡೆದಿದ್ದೇರ ಎಂದು ತಿಳಿದ ನಂತರ ನಾನು ಪ್ರತಿವಾದಿಗಳಿಗೆ ವಕೀಲರ ಮೂಲಕ ನೋಟಿಸು ಕೊಡಿಸಿಲ್ಲ. ಪ್ರತಿವಾದಿಗಳು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ದಾವಾ ಜಮೀನುಗಳನ್ನು ಮಾರಾಟ ಮಾಡುವುದಿಲ್ಲ ಎಂದು ಒಪ್ಪಿಕೊಂಡ ಕಾರಣ ಅವರು ಸದರಿ ಜಮೀನುಗಳನ್ನು ವಾದ ಪತ್ರದಲ್ಲಿ ಹೇಳಿರುವಂತೆ ಮಾರಾಟ ಮಾಡಲು ಪ್ರಯತ್ನಿಸಿಲ್ಲ ಎಂದರೆ ಸರಿಯಲ್ಲ. ರಿಟ್ ಅರ್ಜಿಗೆ ಸಹಾಯವಾಗಲೆಂದು ಈ ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಜಮೀನುಗಳಲ್ಲಿ 1 ರಿಂದ 6ನೇ ಪ್ರತಿವಾದಿಗಳು ಮನೆಗಳನ್ನು ಕಟ್ಟಿಕೊಂಡು ವಾಸಿಸುತ್ತಿದ್ದಾರೆ ಎಂದರೆ ಸರಿ. ಈ ಕಾರಣ ಅವರಿಗೆ ದಾವಾ ಜಮೀನುಗಳನ್ನು ಮಾರಾಟ ಮಾಡುವ ಪ್ರಮೇಯವೇ ಬಂದಿಲ್ಲ ಎಂದರೆ ಸರಿಯಲ್ಲ. ದಿ.23.05.2022 ರಂದು ಪ್ರಸ್ತುತ ದಾವೆಗೆ ವ್ಯಾಜ್ಯ ಕಾರಣ ಉಂಟಾಯಿತು. ಈ ವಿಚಾರವನ್ನು ನನ್ನ ವಕೀಲರಿಗೆ ಹೇಳಿದ್ದೆ. ಈ ದಾವೆಯಲ್ಲಿ ನಮೂದಿಸಿರುವ ವ್ಯಾಜ್ಯ ಕಾರಣ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಪ್ರತಿವಾದಿಗಳ ಮೇಲೆ ಒತ್ತಡ ಹೇರಲು ಸುಳ್ಳು ದಾವಾ ಸಲ್ಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.